# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ – ೪ಎ<br>Part – IVA | ಬೆಂಗಳೂರು, ಸೋಮವಾರ, ೧೦, ಆಗಸ್ಟ್, ೨೦೨೬ (ಶ್ರಾವಣ, ೧೯, ಶಕವರ್ಷ, ೧೯೪೮)<br>BENGALURU, MONDAY, 10, AUGUST, 2026 ( SHRAVANA , 19, SHAKAVARSHA, 1948) | ನಂ. ೬೦೪<br>No. 604 |

## ಕರ್ನಾಟಕ ಸರ್ಕಾರ

ಸಂಖ್ಯೆ: ಇಪಿ 50 ಡಿಪಿಐ 2026

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಡಾ|| ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:10.08.2026.

## ಅಧಿಸೂಚನೆ

ಕರ್ನಾಟಕ ನಾಗರೀಕ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14) ರ ಕಲಂ-3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡವನ್ನು 8ನೇ ಪ್ರಕರಣದೊಡನೆ ಓದಿಕೊಂಡಂತೆ ಮತ್ತು ತನ್ಮೂಲಕ ಅಗತ್ಯಪಡಿಸಲಾದಂತೆ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2026ರ ಕರಡನ್ನು ದಿನಾಂಕ: 29.06.2026 ರಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯ ಭಾಗ – IVA (ಸಂಖ್ಯೆ: 466) ರಲ್ಲಿ ಪ್ರಕಟಿಸಿ, ಪ್ರಕಟಣೆಯ ದಿನಾಂಕದಿಂದ ಏಳು ದಿನಗಳೊಳಗಾಗಿ ಅದರಿಂದ ಭಾದಿತರಾಗಲು ಸಂಭವವಿರುವ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಲಾಗಿರುವುದರಿಂದ;

ಸದರಿ ವಿಶೇಷ ಸಂಚಿಕೆಯ ರಾಜ್ಯ ಪತ್ರವನ್ನು ದಿನಾಂಕ: 29.06.2026 ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ ;

ಮತ್ತು ಸದರಿ ಕರಡು ತಿದ್ದುಪಡಿ ನಿಯಮಗಳ ಬಗ್ಗೆ ಅದರಿಂದ ಭಾದಿತರಾಗಬಹುದಾದ ಎಲ್ಲಾ ವ್ಯಕ್ತಿಗಳಿಂದ ಸ್ವೀಕೃತವಾಗಿರುವ ಆಕ್ಷೇಪಣೆ ಮತ್ತು ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಗಣಿಸಲಾಗಿದೆ;

ಈಗ ಕರ್ನಾಟಕ ನಾಗರೀಕ ಸೇವೆಗಳು ಅಧಿನಿಯಮ 1978 (1990ರ ಕರ್ನಾಟಕ ಅಧಿನಿಯಮ 14) ರ 8ನೇ ಪ್ರಕರಣದೊಂದಿಗೆ ಓದಿಕೊಂಡು 3ನೇ ಪ್ರಕರಣದ (1) ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ) (ನೇಮಕಾತಿ) ನಿಯಮಗಳು, 1967ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸಿದೆ, ಎಂದರೆ:-

## ನಿಯಮಗಳು

1. **ಶೀರ್ಷಿಕೆ ಮತ್ತು ಪ್ರಾರಂಭ:** (1) ಈ ನಿಯಮಗಳನ್ನು ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2026 ಎಂದು ಕರೆಯತಕ್ಕದ್ದು.

   (2) ಈ ನಿಯಮಗಳು ಕರ್ನಾಟಕ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟಗೊಂಡ ದಿನಾಂಕದಿಂದ ಜಾರಿಯಾಗತಕ್ಕದ್ದು.

2. **ಕೋಷ್ಟಕದ ತಿದ್ದುಪಡಿ:** ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ) (ನೇಮಕಾತಿ) ನಿಯಮಗಳು, 1967ರ ಕೋಷ್ಟಕದ ಕ್ರಮ ಸಂಖ್ಯೆ: 66-A ರಲ್ಲಿ "ಪದವೀಧರ ಪ್ರಾಥಮಿಕ ಶಿಕ್ಷಕರ (6 ರಿಂದ 8 ನೇ ತರಗತಿ)" ನಂತರದಲ್ಲಿ ಈ ಕೆಳಗಿನಂತೆ ಸೇರ್ಪಡೆಗೊಳಿಸತಕ್ಕದ್ದು ,-

| | | | | | |
|---|---|---|---|---|---|
| 66 - ಬಿ | ಗಣಕ ವಿಜ್ಞಾನ ಶಿಕ್ಷಕರು<br><br>(1 ರಿಂದ 8ನೇ ತರಗತಿ) | 44425-83700 | 2500 | **ನೇರ ನೇಮಕಾತಿಯಿಂದ :-** ಸರ್ಕಾರದಿಂದ ಕಾಲಕಾಲಕ್ಕೆ ರಚಿಸುವ ನಿಯಮಗಳಾನುಸಾರ | ಕಾನೂನಿನ ಮೂಲಕ ಸ್ಥಾಪಿಸಲಾದ ವಿಶ್ವವಿದ್ಯಾನಿಲಯದ ಈ ಕೆಳಕಂಡ ಯಾವುದಾದರೊಂದು ಸ್ನಾತಕ ಪದವಿಯಲ್ಲಿ ಕನಿಷ್ಠ ಸರಾಸರಿ ಶೇಕಡ ಐವತ್ತು ಅಂಕಗಳನ್ನು ಹೊಂದಿರತಕ್ಕದ್ದು:-<br>ಬ್ಯಾಚುಲರ್ ಆಫ್ ಸೈನ್ಸ್ (ಕಂಪ್ಯೂಟರ್ ಸೈನ್ಸ್)<br>ಅಥವಾ<br>ಬ್ಯಾಚುಲರ್ ಆಫ್ ಕಂಪ್ಯೂಟರ್ ಅಪ್ಲಿಕೇಶನ್<br>ಅಥವಾ<br>ಬ್ಯಾಚುಲರ್ ಆಫ್ ಇಂಜಿನಿಯರಿಂಗ್ (ಕಂಪ್ಯೂಟರ್ ಸೈನ್ಸ್) / (ಇನ್ಫಾರ್ಮೆಷನ್ ಸೈನ್ಸ್) / (ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯೂನಿಕೇಷನ್)<br>ಅಥವಾ<br>ಬ್ಯಾಚುಲರ್ ಆಫ್ ಟೆಕ್ನಾಲಜಿ (ಕಂಪ್ಯೂಟರ್ ಸೈನ್ಸ್) / (ಇನ್ಫಾರ್ಮೆಷನ್ ಸೈನ್ಸ್) / (ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯೂನಿಕೇಷನ್)<br>ಮತ್ತು<br>ಶಾಲಾ ಶಿಕ್ಷಣ ಇಲಾಖೆಯ ಗಣಕ ವಿಜ್ಞಾನ ಶಿಕ್ಷಕರಾಗಿ ನೇಮಕಾತಿ ಹೊಂದಿದಲ್ಲಿ ರಾಷ್ಟ್ರೀಯ ಶಿಕ್ಷಕರ ಶಿಕ್ಷಣ ಪರಿಷತ್ (ಎನ್.ಸಿ.ಟಿ.ಇ.) ನಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ನೇಮಕಾತಿಗೊಂಡ 5 ವರ್ಷಗಳ ಒಳಗಾಗಿ ಶಿಕ್ಷಣದಲ್ಲಿ ಪದವಿ (ಬಿ.ಎಡ್.) ಅರ್ಹತೆಯನ್ನು ಗಳಿಸಿಕೊಳ್ಳತಕ್ಕದ್ದು. 5 ವರ್ಷಗಳ ಒಳಗಾಗಿ ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ಪೂರ್ಣಗೊಳಿಸತಕ್ಕದ್ದು.<br><br>ಪರಂತು, ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗ / ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-Iಕ್ಕೆ ಸೇರಿದ ಅಭ್ಯರ್ಥಿಯಾಗಿದ್ದಲ್ಲಿ ಅಥವಾ ಅಂಗವೈಕಲ್ಯವುಳ್ಳ ಅಭ್ಯರ್ಥಿಯಾಗಿದ್ದಲ್ಲಿ ಪದವಿಯಲ್ಲಿ ಕನಿಷ್ಟ ಶೇಕಡ ನಲವತ್ತೈದು ಅಂಕಗಳನ್ನು ಪಡೆದಿರತಕ್ಕದ್ದು. |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಮಲ್ಲಿಕಾರ್ಜುನ ರಾಮಚಂದ್ರಪ್ಪ)**
ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ),
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

# GOVERNMENT OF KARNATAKA

No.EP 50 DPI 2026

Karnataka Government Secretariat
M.S.Building,
Dr|| B.R. Ambedkar Veedhi,
Bengaluru, Dated:10.08.2026.

## NOTIFICATION

Whereas the draft of the Karnataka Education Department Services (Department of Public Instruction) (Recruitment) (Amendment) Rules, 2026 was published as required by clause (a) of sub-section (2) of section 3 read with Section 8 of the Karnataka State Civil Services Act, 1978 (Karnataka Act 14 of 1990) in Part-IVA (No.466) of the Karnataka Gazette Extraordinary dated:29.06.2026 inviting objections and suggestions from all persons likely to be affected thereby within seven days from the date of its publication in the official Gazette.

Whereas the said Gazette was made available to the public on 29.06.2026.

And whereas the objections and suggestions received from the persons likely to be affected thereby have been considered by the Government.

Now, therefore, in exercise of the powers conferred by sub-section (1) of section 3 read with section 8 of the Karnataka State Civil Services Act, 1978 (Karnataka Act 14 of 1990), the Government of Karnataka hereby makes the following rules further to amend the Karnataka Education Department Services (Department of Public Instruction) (Recruitment) Rules, 1967, namely.

## RULES

1. **Title and commencement, -** (1) These rules may be called the Karnataka Education Department Services (Department of Public Instruction) (Recruitment) (Amendment) Rules, 2026.

(2) They shall come into force from date of their final publication in the Official Gazette.

**2. Amendment of Schedule, -** In the Karnataka Education Department Services (Department of Public Instruction) (Recruitment) Rules, 1967, in the schedule after the category of post of "Graduate Primary Teacher for classes 6 to 8", in serial no.66-A and entries relating thereunder the following shall be inserted, namely:-

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



| | | | | | |
|---|---|---|---|---|---|
| 66 - B | Computer Science Teacher<br><br>(1st to 8th std) | 44425-83700 | 2500 | **By Direct Recruitment:** in accordance with the rules framed by the government from time to time | Must be holder of any one Bachelor's Degree as below, of a University established by law with minimum 50% of aggregate marks<br><br>Bachelor of Science (Computer Science) or<br>Bachelor of Computer Applications<br>or<br>Bachelor of Engineering (Computer Science) / (Information Science) / (Electronics and Communication)<br>Or<br>Bachelor of Technology (Computer Science) / (Information Science) / (Electronics and Communication)<br>AND<br>Must also obtain Bachelor of Education (B.Ed) from an institution recognized by NCTE within 5 years of appointment as Computer Science Teacher in School Education Department and must also clear Teacher Eligibility Test within 5 years of appointment as Computer Science Teacher in School Education Department.<br>Provided that in case of a candidate belonging to the Scheduled Caste /Scheduled Tribe / Category-I of Other Backward Classes or a candidate belonging to the category of person with disability the above requirement of marks in Bachelor's Degree shall be minimum forty-five percent. |

By Order and in the name of the
Governor of Karnataka,

**(Mallikarjuna Ramachandrappa)**
Under Secretary to Government (Admin)
Department of School Education & Literacy

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

P S BASAVARAJU